ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 11/3/2004

# ತುಳಸಿ ಮುನಿರಾಜುಗೌಡ ಪ್ರಮಾಣ ವಚನ ಸ್ವೀಕಾರ

**ವಿಧಾನಪರಿಷತ್:** ವಿಧಾನಸಭೆಯಿಂದ ವಿಧಾನಪರಿಷತ್‌ಗೆ ಚುನಾಯಿತರಾದ ಮುನಿರಾಜುಗೌಡ ಅವರು ಬುಧವಾರ ಕಲಾಪದ ಆರಂಭದ ವೇಳೆ



ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಕೇಸರಿ ಶಾಲು ಧರಿಸಿ ಆಗಮಿಸಿದ್ದ ತುಳಸಿ ಮುನಿರಾಜುಗೌಡ ಎಲ್ಲರ ಗಮನ ಸೆಳೆದರು. ಸಭಾಪತಿ ಬಸವರಾಜ ಹೊರಟ್ಟಿಯವರು ತಮ್ಮ ಪೀಠದಿಂದ ಪ್ರಮಾಣವಚನ ಬೋಧಿಸಿ, ಸಂವಿಧಾನದ ಪುಸ್ತಕ ನೀಡಿ ಸ್ವಾಗತಿಸಿದರು.

ಪ್ರಮಾಣವಚನದ ನಂತರ ತುಳಸಿ, ಮುನಿರಾಜುಗೌಡ ಅವರು ಪ್ರತಿಪಕ್ಷದ ಸಾಲಿನಲ್ಲಿ ತೆರಳಿ ಸದಸ್ಯರನ್ನು ಪರಿಚಯಿಸಿಕೊಂಡರು. ನಂತರ ಆಡಳಿತ ಪಕ್ಷದ ಸದಸ್ಯರಿಂದ ಅಭಿನಂದನೆ ಸ್ವೀಕರಿಸಿದರು. ಕಂದಾಯ ಸಚಿವ ಆರ್.ಅಶೋಕ್ ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದು, ತಮಗೆ ನಿಗದಿಪಡಿಸಿದ್ದ ಆಸನದಲ್ಲಿ ಆಸೀನರಾದರು. ಸದನಕ್ಕೆ ಆಗಮಿಸುವ ಪೂರ್ವದಲ್ಲಿ ವಿಧಾನಸೌಧದ ಮುಖ್ಯದ್ವಾರದ ಮೆಟ್ಟಿಲಿಗೆ ಹಣೆ ಮುಟ್ಟಿಸಿ ನಮಸ್ಕರಿಸಿ ಒಳಗೆ ಪ್ರವೇಶ ಮಾಡಿದ್ದು ವಿಶೇಷವಾಗಿತ್ತು.